# ಜೆಎಸ್‌ಎಸ್ ಮಹಾವಿದ್ಯಾಪೀಠ
## ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ-278

**26 ಜೂನ್ 2021 * ಶನಿವಾರ * ಸಂಜೆ 6.00**

## ಡಿಜಿಟಲ್ ಕಾರ್ಯಕ್ರಮ

### ದಿವ್ಯ ಆಶೀರ್ವಾದ

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**

ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ

ಸುತ್ತೂರು ಶ್ರೀಕ್ಷೇತ್ರ

### ಉಪನ್ಯಾಸ



**ಡಾ. ಶೀಲಾದೇವಿ ಎಸ್. ಮಳೀಮಠ್**

ಕನ್ನಡ ಪ್ರಾಧ್ಯಾಪಕರು, ಬಿಎಂಎಸ್ ಮಹಿಳಾ ಮಹಾವಿದ್ಯಾಲಯ, ಬೆಂಗಳೂರು

**ವಿಷಯ : ವಚನಗಳಲ್ಲಿ ವೈವಿಧ್ಯತೆ**

(ಉಪನ್ಯಾಸದ ನಂತರ ಆನ್‌ಲೈನ್‌ನಲ್ಲಿ ಬರುವ ಪ್ರಶ್ನೆಗಳಲ್ಲಿ ಆಯ್ದವುಗಳಿಗೆ ಉತ್ತರಿಸಲಾಗುವುದು)

ಆನ್‌ಲೈನ್ ಮೂಲಕ ನೇರವಾಗಿ ವೀಕ್ಷಿಸಲು ಹಾರ್ದಿಕ ಸ್ವಾಗತ

LIVE STREAMING

YouTube http://Youtube.com/c/JSSMahavidyapeethaonline

https://www.facebook.com/JSSMVP

ಶ್ರೀಮತ್ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದ ನಿಲಯಗಳು ಹಾಗೂ ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಅವರು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ವ್ಯಕ್ತಿಗಳ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆ ಪ್ರಸಾರಕ್ಕಾಗಿ ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿ ಮುಂತಾದ ಹಲವಾರು ಸಂಸ್ಥೆಗಳ ಮೂಲಕ ಧರ್ಮ ದಾಸೋಹವನ್ನು ನಡೆಸುತ್ತಿದ್ದರು. 1986 ರಲ್ಲಿ ಶರಣ ಸಾಹಿತ್ಯ ಪರಿಷತ್ ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಗಳನ್ನು ಸ್ಥಾಪಿಸಿ ಅದಕ್ಕೊಂದು ಹೊಸ ಆಯಾಮವನ್ನು ನೀಡಿದರು.

ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ದಿನಾಂಕ 12.5.1996 ರಂದು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನ ಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

ಪ್ರಸ್ತುತ ಕೋವಿಡ್ 19ರ ಹಿನ್ನೆಲೆಯಲ್ಲಿ ಡಿಜಿಟಲ್ ಕಾರ್ಯಕ್ರಮವನ್ನು ಏರ್ಪಡಿಸಿಕೊಂಡು ಬರಲಾಗುತ್ತಿದೆ.

**ಡಾ. ಶೀಲಾದೇವಿ ಎಸ್. ಮಳೀಮಠ್‌ರವರು** ಬೆಂಗಳೂರು ವಿಶ್ವವಿದ್ಯಾಲಯದ ಕನ್ನಡ ಎಂಎ ಪದವೀಧರರು. ಎಂಎಡ್, ಜರ್ನಲಿಸಂನಲ್ಲಿ ಡಿಪ್ಲೊಮಾ ಹಾಗೂ "ವಚನ ಮತ್ತು ಸಮೂಹ ಮಾಧ್ಯಮ" ವಿಷಯದಲ್ಲಿ ಪಿಎಚ್‌ಡಿ ಮಾಡಿದ್ದಾರೆ. ಬೆಂಗಳೂರಿನ ಬಿಎಂಎಸ್ ಮಹಿಳಾ ವಿದ್ಯಾಲಯದಲ್ಲಿ ಸುಮಾರು ಮೂರು ದಶಕಗಳ ಬೋಧನಾನುಭವ ಹೊಂದಿದ್ದಾರೆ. ಕಾಲೇಜಿನಲ್ಲಿ ಲಾಸ್ಯ ಹಾಬಿ ಕ್ಲಬ್ಬಿನ ಸಂಚಾಲಕರಾಗಿ "ಬಿಎಂಎಸ್ ಜ್ಞಾನದ ತೇರು" ಪರಿಕಲ್ಪನೆಯನ್ನು ರೂಪಿಸಿದ್ದಾರೆ. ಬಹುಮುಖ ಕಾರ್ಯಚಟುವಟಿಕೆಗಳಿಂದ "ರಾಷ್ಟ್ರೀಯ ಸದ್ಭಾವನಾ ಪ್ರಶಸ್ತಿ"ಗೆ ಭಾಜನರಾಗಿದ್ದಾರೆ. ಬೆಂಗಳೂರು ವಿಶ್ವವಿದ್ಯಾಲಯದ ಅಕ್ಯಾಡೆಮಿಕ್ ಸ್ಟಾಫ್ ಕಾಲೇಜಿನಿಂದ "ಅತ್ಯುತ್ತಮ ಶಿಕ್ಷಕಿ' ಪ್ರಶಸ್ತಿಗೆ ಭಾಜನರಾಗಿದ್ದಾರೆ. ಹದಿಮೂರು ಎಂಫಿಲ್ ಮತ್ತು ಇಬ್ಬರು ಪಿಎಚ್‌ಡಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡಿದ್ದಾರೆ. ಉತ್ತಮ ಸಾಮಾಜಿಕ, ಸಾಂಸ್ಕೃತಿಕ ವ್ಯಕ್ತಿತ್ವವುಳ್ಳವರು. 45ಕ್ಕೂ ಹೆಚ್ಚು ಸಂಶೋಧನ ಪ್ರಬಂಧಗಳ ಕರ್ತೃಗಳು. ಜಸ್ಟಿಸ್ ಸಂಸ್ಥೆಯಲ್ಲಿ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ ಸಂಪನ್ಮೂಲ ವ್ಯಕ್ತಿಗಳಾಗಿದ್ದಾರೆ. ಸ್ವತಃ ಕ್ರೀಡಾಪಟುಗಳಾಗಿದ್ದಾರೆ. ಕರಾಟೆಯಲ್ಲಿ ಬ್ಲ್ಯಾಕ್ ಬೆಲ್ಟ್ ಸಾಧನೆ ಮಾಡಿದ್ದಾರೆ. ಸಂವೇದನಾಶೀಲ ವ್ಯಕ್ತಿತ್ವ ಹೊಂದಿರುವ ಕ್ರಿಯಾಶೀಲರು.